# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಾಸನದಲ್ಲಿ ಗ್ರೀನ್‌ಫೀಲ್ಡ್ ದೇಶಿಯ ಪ್ರಯಾಣಿಕ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಗಳಿಗೆ ಮತ್ತು ವಿದ್ಯುತ್ ಪ್ರಸರಣ ಅಡೆತಡೆಯನ್ನು ತೆರವುಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಮೂಅಇ 47 ರಾಅವಿ 2018, ದಿನಾಂಕ 25/06/2021.
2) ಸರ್ಕಾರದ ಆದೇಶ ಸಂಖ್ಯೆ: ಮೂಅಇ 90 ರಾಅವಿ 2020, ದಿನಾಂಕ:30/12/2021.
3) ವ್ಯವಸ್ಥಾಪಕ ನಿರ್ದೇಶಕರು, ಕೆಎಸ್‌ಐಐಡಿಸಿ ಇವರ ಪತ್ರ ಸಂಖ್ಯೆ: ಐಪಿಡಿ / 388 /1553/ 2021-22, ದಿನಾಂಕ 03/01/2022.
4) ಸರ್ಕಾರದ ಆದೇಶ ಸಂಖ್ಯೆ: ಮೂಅಇ 22 ನಮೂಯೋ 2020, ದಿನಾಂಕ:15/04/2021.
5) ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2021, ದಿನಾಂಕ:31/12/2021.
6) ಆಇ 205 ವೆಚ್ಚ-1/2021, ದಿನಾಂಕ 12/02/2022

******

**ಪ್ರಸ್ತಾವನೆ**:-

1) ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 25/06/2021ರ ಸರ್ಕಾರದ ಆದೇಶದಲ್ಲಿ ಹಾಸನ ಗ್ರೀನ್‌ಫೀಲ್ಡ್ ದೇಶಿಯ ಪ್ರಯಾಣಿಕ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಗಳಿಗೆ ಮೆ|| ರೈಟ್ಸ್ ಇಂಡಿಯಾ ಲಿಮಿಟೆಡ್ ಇವರು ಸಲ್ಲಿಸಿರುವ ರೂ 193.65 ಕೋಟಿ ಮೊತ್ತದ ಅಂದಾಜಿನೊಂದಿಗೆ ಅಂದಾಜು ವೆಚ್ಚದ ವಿವರವಾದ ವರದಿಗೆ ಅನುಮೋದನೆ ಹಾಗೂ ಎರಡು ಪ್ಯಾಕೇಜ್‌ಗಳಲ್ಲಿ ಹಾಸನ ಗ್ರೀನ್‌ಫೀಲ್ಡ್ ದೇಶಿಯ ಪ್ರಯಾಣಿಕ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಗಳಿಗೆ ರೂ 193.65 ಕೋಟಿ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ (ಇದರಲ್ಲಿ ವಿಮಾನ ನಿಲ್ದಾಣ ನಿರ್ಮಾಣದ ಕಾಮಗಾರಿಗಳಿಗೆ ಸುಮಾರು ರೂ 174.88 ಕೋಟಿ ಮತ್ತು ಅಡೆತಡೆಗಳನ್ನು ತೆಗೆದುಹಾಕಲು ಸುಮಾರು ರೂ 18.76 ಕೋಟಿಗಳು ಒಳಗೊಂಡಿರುತ್ತದೆ)

2) ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ:30/12/2021ರ ಆದೇಶದಲ್ಲಿ ಹಾಸನ ವಿಮಾನ ನಿಲ್ದಾಣದ ಎರಡನೇ ಹಂತದ ಅಭಿವೃದ್ಧಿ ರನ್‌ವೇ ವಿಸ್ತರಣೆಗಾಗಿ (2200 ಮೀಟರ್ ನಿಂದ 3300 ಮೀಟರ್ ವರೆಗೆ) ಅವಶ್ಯವಿರುವ 24 ಎಕರೆ 23 ಗುಂಟೆ ಜಮೀನಿನಲ್ಲಿ ಹೆಚ್ಚುವರಿ ಭೂಮಿಯನ್ನು ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳಲು ರೂ 13.20 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

3) ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ:03/01/2022ರ ಪತ್ರದಲ್ಲಿ ಹಾಸನ ವಿಮಾನ ನಿಲ್ದಾಣದ ಪ್ಯಾಕೇಜ್-1ರ ಕಾಮಗಾರಿಗಳನ್ನು ಕೈಗೊಳ್ಳಲು ರೂ 99.72 ಕೋಟಿ ಗುತ್ತಿಗೆ

ಪುಟ 2ಕ್ಕೆ

ಮೊತ್ತಕ್ಕೆ ಗುತ್ತಿಗೆದಾರರನ್ನು ನೇಮಿಸಲಾಗಿದ್ದು, ಪ್ಯಾಕೇಜ್-1ರ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ ಎಂದು ತಿಳಿಸುತ್ತಾ. ಮೇ: ಐಡೆಕ್ ಸಂಸ್ಥೆಯು ಮಾರ್ಚ್ 2022ರ ಅಂತ್ಯದ ವರೆಗೆ ರೂ 20.70 ಕೋಟಿ ಆರ್ಥಿಕ ಪ್ರಗತಿಯನ್ನು ಸಾಧಿಸುವ ಅಂದಾಜನ್ನು ತಯಾರಿಸಿ ಸಲ್ಲಿಸಿರುತ್ತಾರೆ ಎಂದು ತಿಳಿಸಿರುತ್ತಾರೆ. ಮುಂದುವರೆದು, 220 ಕೆ.ವಿ ಹೆಚ್ಚು ವಿದ್ಯುತ್ ಪ್ರಸರಣ ( HT Lines ) ಶಿವಮೊಗ್ಗ – ಮೈಸೂರು ಮಾರ್ಗವು ಹಾಸನ ವಿಮಾನ ನಿಲ್ದಾಣದ ಮಿತಿಯಲ್ಲಿ ಹಾದು ಹೋಗಿರುವ ಕಾರಣ ಅಡಚಣೆಯಾಗಿದ್ದು, ಸದರಿ ವಿದ್ಯುತ್ ಪ್ರಸರಣ ( HT Lines ) ನ 17.67 ಕೀ.ಮೀಟರ್ ಮಾರ್ಗವನ್ನು ಬದಲಾವಣೆಗಾಗಿ ರೂ 17.96 ಕೋಟಿ ಮೊತ್ತವನ್ನು ಬಿಡುಗಡೆ ಮಾಡುವಂತೆ ಹಾಗೂ ವಿಮಾನ ನಿಲ್ದಾಣದ ವಿದ್ಯುತ್ ಮಾರ್ಗದ (LT Lines) ಬದಲಾವಣೆಗಾಗಿ ರೂ 0.80 ಕೋಟಿಗಳೆಂದು ಅಂದಾಜಿಸಲಾಗಿದ್ದು, ಸದರಿ ಅಡೆತಡೆಯನ್ನು ತೆಗೆಯಲು ಒಟ್ಟು ಮೊತ್ತವಾದ ರೂ 18.76 ಕೋಟಿಗೆ ಈಗಾಗಲೇ ಅನುಮೋದನೆಯನ್ನು ನೀಡಲಾಗಿರುವ ಹಿನ್ನೆಲೆಯಲ್ಲಿ, ಹಾಸನ ವಿಮಾನ ನಿಲ್ದಾಣದ ಕಾಮಗಾರಿಗಳಿಗೆ ರೂ 21 ಕೋಟಿ ಮತ್ತು ವಿದ್ಯುತ್ ಪ್ರಸರಣ ಅಡೆತಡೆಯನ್ನು ತೆಗೆಯಲು ರೂ 18.76 ಕೋಟಿ ಮೊತ್ತವು ಅವಶ್ಯವಿರುವುದರಿಂದ ಹಾಸನ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಗೆ ಅವಶ್ಯವಿರುವ ಒಟ್ಟು ರೂ 39.76 ಕೋಟಿ ಅನುದಾನವನ್ನು ಬಿಡುಗಡೆಗೊಳಿಸುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ (ಕೆಎಸ್ಐಐಡಿಸಿ) ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

4) ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ದಿನಾಂಕ: 15/04/2021ರ ಆದೇಶದಲ್ಲಿ 2021-22ನೇ ಆರ್ಥಿಕ ಸಾಲಿಗೆ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಮುಂದುವರೆದ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಮೋದನೆಯನ್ನು ನೀಡಿ ಆದೇಶಿಸಲಾಗಿದೆ. ಇದರಲ್ಲಿ ಲೆಕ್ಕಶೀರ್ಷಿಕೆ 5465-01-190-1-05-132 - ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ - ಬಂಡವಾಳ ವೆಚ್ಚಗಳು ಅಡಿ 25000.00 ಲಕ್ಷಗಳನ್ನು ಒದಗಿಸಲಾಗಿದೆ.

5) ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ದಿನಾಂಕ: 31/12/2021ರ ಆದೇಶದನ್ವಯ ಹಾಸನ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಗಳಿಗೆ ಅವಶ್ಯವಿರುವ ಒಟ್ಟು ರೂ 39.76 ಕೋಟಿ ಅನುದಾನವನ್ನು ಬಿಡುಗಡೆಗೊಳಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

6) ಅದರಂತೆ, ಆರ್ಥಿಕ ಇಲಾಖೆಯು ಮೇಲೆ ಓದಲಾದ ಕ್ರಮ ಸಂಖ್ಯೆ (6)ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಮೂಅಇ 90 ರಾಅವಿ 2020**
**ಬೆಂಗಳೂರು, ದಿನಾಂಕ: 21ನೇ ಫೆಬ್ರುವರಿ 2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಾಸನ ವಿಮಾನ ನಿಲ್ದಾಣದ ಪ್ಯಾಕೇಜ್-1ರ ಕಾಮಗಾರಿಗಳಿಗೆ ರೂ 21 ಕೋಟಿ ಹಾಗೂ ವಿದ್ಯುತ್ ಪ್ರಸರಣ ಅಡೆತಡೆಯನ್ನು

ಪುಟ 3ಕ್ಕೆ

ತೆಗೆಯಲು ರೂ 18.76 ಕೋಟಿಗಳನ್ನು (ಹಾಸನ ವಿಮಾನ ನಿಲ್ದಾಣದ ಮಿತಿಯಲ್ಲಿ ಹಾದು ಹೋಗಿರುವ 220 ಕೆವಿ ಹೆಚ್ಚು ವಿದ್ಯುತ್ ಪ್ರಸರಣ ( HT Lines) ಶಿವಮೊಗ್ಗ ಮೈಸೂರು ಮಾರ್ಗ ಬದಲಾವಣೆಗಾಗಿ ರೂ 17.96 ಕೋಟಿ ಹಾಗೂ ವಿಮಾನ ನಿಲ್ದಾಣದ ವಿದ್ಯುತ್ ಮಾರ್ಗ ( LT Lines) ಮಾರ್ಗದ ಬದಲಾವಣೆಗಾಗಿ ರೂ 0.80 ಕೋಟಿ ) ಒಟ್ಟಾರೆ ಮೊತ್ತವಾದ ರೂ ರೂ.39.76 ಕೋಟಿ ಅನುದಾನವನ್ನು ವ್ಯವಸ್ಥಾಪಕ ನಿರ್ದೇಶಕರು ಕೆಎಸ್ಐಐಡಿಸಿ ನಿಯಮಿತ ಇವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

2) ಷರತ್ತುಗಳು

- ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೇ ಅದೇ ಉದ್ದೇಶಕ್ಕೆ ಮಾತ್ರ ಬಳಕೆ ಮಾಡತಕ್ಕದ್ದು, ಹಾಗೂ ಇದೇ ಉದ್ದೇಶಕ್ಕೆ ಈಗಾಗಲೇ ವೆಚ್ಚ ಮಾಡಿದ್ದಲ್ಲಿ, ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಬಳಕೆ ಮಾಡುವಂತಿಲ್ಲ.
- ಬಿಡುಗಡೆ ಮಾಡಿರುವ ಅನುದಾನವನ್ನು ಹಾಸನ ವಿಮಾನ ನಿಲ್ದಾಣದ ಕಾಮಗಾರಿಗಳಿಗೆ ರೂ 21 ಕೋಟಿ ಮತ್ತು
- ವಿದ್ಯುತ್ ಪ್ರಸರಣ, ವ್ಯವಸ್ಥಾಪಕ ನಿರ್ದೇಶಕರು, ಕೆಪಿಟಿಸಿಎಲ್ ಇವರಿಗೆ ಅಡೆತಡೆಯನ್ನು ತೆಗೆಯಲು ರೂ 18.76 ಕೋಟಿಗಳನ್ನು ಮಾತ್ರ ಬಳಸಿಕೊಳ್ಳತಕ್ಕದ್ದು.
- ಅನುದಾನ ಬಳಕೆಯ ಬಗ್ಗೆ ನಿಗಧಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

3) ಈ ವೆಚ್ಚವನ್ನು 2021-22 ನೇ ಸಾಲಿನ ಲೆಕ್ಕ ಶೀರ್ಷಿಕೆ "5465-01-190-1-05-132" –ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ-ಬಂಡವಾಳ ವೆಚ್ಚಗಳು" ರಡಿಯಲ್ಲಿ ಲಭ್ಯವಿರುವ ರೂ 6300.52 ಲಕ್ಷಗಳಿಂದ ಭರಿಸತಕ್ಕದ್ದು.

4) ಬಿಡುಗಡೆ ಮಾಡಿರುವ ರೂ 21.00 ಕೋಟಿ ಅನುದಾನವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ ನಿಗಮದ ಮುಖಾಂತರ ಕಾರ್ಯ ನಿರ್ವಾಹಕ ಅಭಿಯಂತರರು, ಹಾಸನ ಇವರಿಗೆ ಬಿಡುಗಡೆ ಮಾಡತಕ್ಕದ್ದು.

ಪುಟ 4ಕ್ಕೆ

5) ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರ್ ಖಜಾನೆ, ಬೆಂಗಳೂರು, ಇಲ್ಲಿ ಸೆಳೆಯಲು ಅನುಮತಿಸಿದೆ.

6) ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 205 ವೆಚ್ಚ-1/2021, ದಿನಾಂಕ:12/02/2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಎನ್. ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು
ಮತ್ತು ಒಳನಾಡು ಜಲಸಾರಿಗೆ ಇಲಾಖೆ

**ಗೆ:**

1. ಪ್ರಧಾನ ಮಹಾಲೇಖಪಾಲರು (ಆಡಿಟ್-1,2,3A & E), ಪ್ರಧಾನ ಮಹಾಲೇಖಪಾಲರ ಕಛೇರಿ, ಎಎಡಿ ಸೆಕ್ಷನ್, ಕೆ.ಪಿ.ಎಸ್.ಸಿ.ಕಚೇರಿ ಎದುರು, ಬೆಂಗಳೂರು,
2. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
3. ಜಿಲ್ಲಾಧಿಕಾರಿ, ಹಾಸನ ಜಿಲ್ಲೆ,ಹಾಸನ
4. ಆಯುಕ್ತರು / ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು,
5. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು
6. ಅಪರ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ ಬೆಂಗಳೂರು.
7. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು,
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1,) ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
11. ನಿರ್ದೇಶಕರು, ಪಿಪಿಪಿ ಕೋಶ), ಮೂಲಸೌಲಭ್ಯ ಅಭಿವೃದ್ಧಿ ಬಂದರುಗಳುಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.